ಪ್ರಜಾವಾಣಿ

# ಸಹಕಾರ ಸಂಘಗಳಲ್ಲಿ ಹಸ್ತಕ್ಷೇಪ ಸಲ್ಲದು

## ಸನ್ಮಾನ ಸಮಾರಂಭದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ

ಪ್ರಜಾವಾಣಿ ವಾರ್ತೆ

ಮೈಸೂರು: 'ಸಹಕಾರ ಸಂಘಗಳಲ್ಲಿ ಸರ್ಕಾರ, ರಾಜಕಾರಣ ಹಸ್ತಕ್ಷೇಪ ಮಾಡಬಾರದು' ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಲಹೆ ನೀಡಿದರು.

ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

'ವಿಧಾನಸಭೆ, ವಿಧಾನಪರಿಷತ್‌ನಲ್ಲಿ ಈ ಸಂಬಂಧ ಚರ್ಚೆಯಾಯಿತು. ಹಸ್ತಕ್ಷೇಪಕ್ಕೆ ನಾವು ಅಸ್ಪದ ಕೊಡಲಿಲ್ಲ. ಎಷ್ಟೋ ಸಹಕಾರ ಸಂಘಗಳು ಬೆಳೆದು ಇಂದು ಬ್ಯಾಂಕ್‌ಗಳಾಗಿ ಪರಿವರ್ತನೆಗೊಂಡಿವೆ. ಕಡಿಮೆ ಬಡ್ಡಿ ದರದಲ್ಲಿ ಸಂಘದ ಸದಸ್ಯರಿಗೆ ಸಾಲ ನೀಡುವ ಮೂಲಕ ಕಷ್ಟದ ಕಾಲದಲ್ಲಿ ನೆರವಾಗಿವೆ' ಎಂದರು.

ಒಬ್ಬ ವ್ಯಕ್ತಿಯಿಂದ ಸಹಕಾರ ಸಂಘಗಳು ಬೆಳೆಯಲು ಸಾಧ್ಯವಿಲ್ಲ. ಒಬ್ಬರಿಗೊಬ್ಬರು ಕೂಡಿಕೊಂಡು ಶಿಅವಳಿಕೆಯಿಂದ ಕೆಲಸ ಮಾಡಿದರೆ ಸಂಘಗಳು ಬೆಳೆಯಲು ಸಾಧ್ಯ ಎಂದು ಸಲಹೆ ನೀಡಿದರು.

ಶಾಸಕ ಜಿ.ಡಿ.ಹರೀಶ್ ಗೌಡ

**ಮುಖ್ಯಾಂಶಗಳು**

- ನಗಾರಿ ಬಾರಿಸುವ ಮೂಲಕ ಕಾರ್ಯಕ್ರಮ ಉದ್ಘಾಟನೆ
- ಸಂಘದ ಸದಸ್ಯರಿಗೆ ಆರೋಗ್ಯ ತಪಾಸಣಾ ಶಿಬಿರ
- 20ಕ್ಕೂ ಹೆಚ್ಚು ಹಿರಿಯ ಸಹಕಾರಿಗಳಿಗೆ ಸಹಕಾರರತ್ನ ಪ್ರಶಸ್ತಿ ಪ್ರದಾನ

ಮಾತನಾಡಿ, 'ಅವ್ಯವಹಾರ, ವ್ಯತ್ಯಾಸಗಳಿಂದ ಎಷ್ಟೋ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿಲ್ಲ. ಆದರೆ ಕೃಷ್ಣರಾಜೇಂದ್ರ ಬ್ಯಾಂಕ್ 99 ವರ್ಷಗಳು ತುಂಬಿದ್ದು, ಎಲ್ಲವೂ ಸರಿ ಇದ್ದರೆ ಮಾತ್ರ ಸಂಘಗಳು ಯಶಸ್ವಿಯಾಗಿ ನಡೆಯಲು ಸಾಧ್ಯ. ಈ ಹಿಂದೆ ಸಹಕಾರ ಸಂಘಗಳ ಚುನಾವಣೆಗಳು ಗೊತ್ತೇ ಆಗುತ್ತಿರಲಿಲ್ಲ. ಆದರೆ ಈಗ ಲೋಕಸಭೆ, ವಿಧಾನಸಭಾ ಚುನಾವಣೆಗಳಿಗಿಂತಲೂ ಕಡಿಮೆ ಇಲ್ಲದಂತೆ ಚುನಾವಣೆಗಳು ನಡೆಯುತ್ತವೆ' ಎಂದು ಹೇಳಿದರು.

'9088 ಸದಸ್ಯರನ್ನು ಹೊಂದಿರುವ ಈ ಬ್ಯಾಂಕ್ ಶೇ 8ರ ಬಡ್ಡಿ ದರದಲ್ಲಿ ₹ 43 ಕೋಟಿ ಸಾಲ ನೀಡಿದೆ. ಯಾವುದೇ ಸದಸ್ಯರಿಗೆ ಬ್ಯಾಂಕ್ ನಮ್ಮದು ಎಂಬ ಮನೋಭಾವ ಬರಬೇಕು. ಎಲ್ಲಾ ಸದಸ್ಯರು ಸಭೆಯಲ್ಲಿ ಭಾಗವಹಿಸಿದಾಗ ಮಾತ್ರ ಯಶಸ್ವಿಯಾಗಲು ಸಾಧ್ಯ' ಎಂದು ಹೇಳಿದರು.



ಮೈಸೂರಿನ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಶ್ರೀಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್‌ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳನ್ನು ಸನ್ಮಾನಿಸಲಾಯಿತು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಜಿ.ಡಿ.ಹರೀಶ್‌ಗೌಡ, ಶರತ್‌ಚಂದ್ರ ಸ್ವಾಮೀಜಿ ಪಾಲ್ಗೊಂಡಿದ್ದರು

'ಸಹಕಾರ ಸಂಘಗಳಲ್ಲಿ ರಾಜಕಾರಣ, ಸರ್ಕಾರದ ಹಸ್ತಕ್ಷೇಪ ಇಲ್ಲದಂತೆ ಸ್ವಾಯತ್ತೆ ಇದ್ದಾಗ ಮಾತ್ರ ಯಶಸ್ವಿಯಾಗಲು ಸಾಧ್ಯ. ಖಾಸಗಿ ಬ್ಯಾಂಕ್‌ಗಳಲ್ಲಿ ಷೇರುದಾರರು ದೊಡ್ಡ ಉದ್ಯಮಿಗಳಾಗಿರುತ್ತಾರೆ. ಆದರೆ ಸಹಕಾರ ಸಂಘಗಳಲ್ಲಿ ಇದು ಕಡಿಮೆ. ಮಧ್ಯಮ ವರ್ಗದವರು ಹೆಚ್ಚಿನ ಜನರು ಇರುತ್ತಾರೆ. ಸಹಕಾರಿ ಸಂಸ್ಥೆಗಳು ಉಳಿಯಬೇಕು, ಬೆಳೆಯಬೇಕು' ಎಂದರು.

ಕುಂದೂರು ಮಠದ ಶರತ್‌ಚಂದ್ರ ಸ್ವಾಮೀಜಿ ಮಾತನಾಡಿದರು. ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು, ನಿರ್ದೇಶಕರಾದ ಎಂ.ಡಿ. ಪಾರ್ಥಸಾರಥಿ, ಕೆ.ಜಿ. ಶಂಕರನಾರಾಯಣಶಾಸ್ತ್ರಿ, ನಂಸಿದ್ದಪ್ಪ ಎಂ.ಎ., ಎಚ್.ಎನ್.ಸರ್ವಮಂಗಳ, ಬಿ.ನಾಗರಾಜ್, ಎಂ.ಎನ್. ನವೀನ್‌ಕುಮಾರ್, ಎಚ್.ವಿ.ಭಾಸ್ಕರ್, ಎಂ.ಎಸ್.ಅರುಣ್ ಸಿದ್ದಪ್ಪ, ವಿ.ಎಂ. ನಾಗೇಂದ್ರ ಪ್ರಸಾದ್ ಇದ್ದರು.

ಕನ್ನಡಪ್ರಭ

# ಸಹಕಾರ ಸಂಘಗಳಲ್ಲಿ ಸರ್ಕಾರದ ಹಸ್ತಕ್ಷೇಪ ಸಲ್ಲ

## ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ | ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್‌ನಿಂದ ಹಿರಿಯ ಸಹಕಾರಿಗಳಿಗೆ ಸನ್ಮಾನ

• **ಕನ್ನಡಪ್ರಭ ವಾರ್ತೆ** ಮೈಸೂರು

ಸಹಕಾರ ಸಂಘಗಳಲ್ಲಿ ಸರ್ಕಾರ ಮತ್ತು ರಾಜಕಾರಣಿಗಳು ಹಸ್ತಕ್ಷೇಪ ಮಾಡಬಾರದು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ನಗರದ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಭಾನುವಾರ ಆಯೋಜಿಸಿದ್ದ ಹಿರಿಯ ಸಹಕಾರಿಗಳನ್ನು ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿಧಾನಸಭೆ, ವಿಧಾನಪರಿಷತ್ತಿನಲ್ಲಿ ಈ ಸಂಬಂಧ ಚರ್ಚೆಯಾಯಿತು. ನಾವು ಅದಕ್ಕೆ ಆಸ್ಪದ ಕೊಡಲಿಲ್ಲ ಎಂದರು.

ಸಹಕಾರ ಕ್ಷೇತ್ರದಲ್ಲಿ ಸರ್ಕಾರ ಮತ್ತು ರಾಜಕಾರಣಿಗಳು ಹಸ್ತಕ್ಷೇಪ ಮಾಡಬಾರದು ಎಂಬ ದೃಷ್ಟಿಯಿಂದ ಸಹಕಾರಿ ಕ್ಷೇತ್ರಕ್ಕೆ ನಿಯಮಕ್ಕೆ ತಿದ್ದುಪಡಿ ತಂದಿದ್ದ ಕಾಯ್ದೆಯನ್ನು ವಿಧಾನಪರಿಷತ್ತಿನಲ್ಲಿ ತಡೆಹಿಡಿಯಲಾಗಿತ್ತು ಎಂದು ಅವರು ಹೇಳಿದರು.

ಬ್ಯಾಂಕುಗಳಲ್ಲಿ ಪದಸ್ತುಗಳನ್ನು ನಿಭಾಯಿಸಿ ಸಾಲ ಪಡೆಯುವ ಕಷ್ಟದ ಸಮಯದಲ್ಲಿ ಸಹಕಾರಿ ಸಂಘಗಳು ನೆರವಾಗಲಿವೆ. ಸಹಕಾರಿ ಸಂಘ-ಸಂಸ್ಥೆಗಳಲ್ಲಿ ಹಣ ಕೂಡಿಕೆ ಮಾಡುವುದು ಮನೆಯಲ್ಲಿಯೇ ಇಟ್ಟಂತೆ. ಸಹಕಾರಿ ಸಂಘಗಳು ಮುನ್ನಡೆಯಲು ಸದಸ್ಯರ ಸಹಕಾರ ಮುಖ್ಯವಾದದ್ದು. ಸಂಸ್ಥೆಯನ್ನು ಪ್ರಾರಂಭಿಸುವುದು ಸುಲಭ. ಆದರೆ, ಯಶಸ್ವಿಯಾಗಿ ಮುನ್ನಡೆಸುವುದು ಸುಲಭವಲ್ಲ ಎಂದು ಅವರು ತಿಳಿಸಿದರು.

ಎಲ್ಲವೂ ಸರಿ ಇದ್ದರೆ ಮಾತ್ರ ಯಶಸ್ವಿ



ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ಹಿರಿಯ ಸಹಕಾರಿಗಳನ್ನು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸನ್ಮಾನಿಸಿದರು. ಶ್ರೀ ಶರತ್ ಚಂದ್ರ ಸ್ವಾಮೀಜಿ, ಶಾಸಕ ಜಿ.ಡಿ. ಹರೀಶ್ ಗೌಡ, ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ. ಬಸವರಾಜು ಇದ್ದರು.

ಶಾಸಕ ಜಿ.ಡಿ. ಹರೀಶ್ ಗೌಡ ಮಾತನಾಡಿ, ಅವ್ಯವಹಾರ, ವ್ಯಾಸಗಳಿಂದ ಎಷ್ಟೋ ಸಹಕಾರ ಸಂಘಗಳು ಕಾರ್ಯ ನಿರ್ವಹಿಸುತ್ತಿಲ್ಲ, ಆದರೆ, ಕೃಷ್ಣರಾಜೇಂದ್ರ ಬ್ಯಾಂಕ್ 99 ವರ್ಷಗಳು ತುಂಬಿದ್ದು, ಎಲ್ಲವೂ ಸರಿ ಇದ್ದರೆ ಮಾತ್ರ ಸಂಘಗಳು ಯಶಸ್ವಿಯಾಗಿ ನಡೆಯಲು ಸಾಧ್ಯ. ಎಲ್ಲಾ ಸದಸ್ಯರು ಸಭೆಯಲ್ಲಿ ಭಾಗವಹಿಸಿದಾಗ ಮಾತ್ರ ಬ್ಯಾಂಕ್ ಯಶಸ್ವಿಯಾಗಲು ಸಾಧ್ಯ ಎಂದರು.

ಈ ಹಿಂದೆ ಸಹಕಾರ ಸಂಘಗಳ ಚುನಾವಣೆಗಳು ಗೊತ್ತೇ ಆಗುತ್ತಿರಲಿಲ್ಲ, ಆದರೆ, ಈಗ ಲೋಕಸಭೆ, ವಿಧಾನಸಭಾ ಚುನಾವಣೆಗಳಿಗಿಂತಲೂ ಕಡಿಮೆ ಇಲ್ಲದಂತೆ ಚುನಾವಣೆಗಳು ನಡೆಯುತ್ತವೆ. 9088 ಸದಸ್ಯರನ್ನು ಹೊಂದಿರುವ ಈ ಬ್ಯಾಂಕ್ ಶೇ.8ರ ಬಡ್ಡಿ ದರದಲ್ಲಿ 43 ಕೋಟಿ ಸಾಲ ನೀಡಿದೆ. ಯಾವುದೇ ಸದಸ್ಯರಿಗೆ ಬ್ಯಾಂಕ್ ನಮ್ಮದು ಎಂಬ ಮನೋಭಾವ ಬರಬೇಕು ಎಂದು ಅವರು ತಿಳಿಸಿದರು.

### ಸಹಕಾರ ರತ್ನ ಪ್ರಶಸ್ತಿ

ಹಿರಿಯ ಸಹಕಾರಿಗಳಾದ ಕೆ.ವಿ. ನರಸಿಂಹಶೆಟ್ಟಿ, ಬಿ. ಪುಟ್ಟಸ್ವಾಮಿ, ಎಸ್.ಬಿ. ವಿಜಯಕುಮಾರ್, ಎಸ್. ಸದಾನಂದ, ಎಂ.ಕೆ. ಪುಟ್ಟಸ್ವಾಮಿ, ಸಿದ್ದರಾಜು, ಪಿ.ಸಿ. ನಾಗರಾಜನ್, ಕೆ.ಎಲ್. ಅನಂತರಾಮಯ್ಯ, ಎನ್. ನಾಗರಾಜು, ಡಿ. ರಾಮು, ಜಿ. ಕೃಷ್ಣ ಕೆ. ಚಂದ್ರ, ಚನ್ನಯ್ಯ, ಬಾಲಂಬ, ಕಾತ್ಯಾಯಿನಿ, ಎನ್. ಜಯಲಕ್ಷ್ಮಿ, ಕೆ. ಆರ್. ಸೀತಾಲಕ್ಷ್ಮಿ, ಸುಶೀಲಮ್ಮ, ಡಿ. ಆಶಾಕುಮಾರಿ, ಕೆ.ಎಸ್. ಸುನಂದಾ ಅವರಿಗೆ ಸಹಕಾರ ರತ್ನ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕುಂದೂರು ಮಠದ ಶ್ರೀ ಡಾ. ಶರತ್ ಚಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಶ್ರೀ ಕೃಷ್ಣರಾಜೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ. ಬಸವರಾಜು, ನಿರ್ದೇಶಕರಾದ ಎಂ.ಡಿ. ಪಾರ್ಥಸಾರಥಿ, ಸರ್ವಮಂಗಳ, ನವೀನ್ ಕುಮಾರ್, ಎಚ್.ವಿ. ಭಾಸ್ಕರ್, ಅರುಣ್ ಸಿದ್ದಪ್ಪ, ನಾಗೇಂದ್ರಪ್ರಸಾದ್ ವಾಟಾಳ್, ಬಿ. ನಾಗರಾಜು, ವೃತ್ತಿಪರ ನಿರ್ದೇಶಕ ಎ. ಶ್ರೀನಿವಾಸಶೆಟ್ಟಿ, ವಿ.ಎಂ. ನಾಗೇಂದ್ರಪ್ರಸಾದ್, ಪ್ರಭಾರ ವ್ಯವಸ್ಥಾಪಕ ಡಿ. ಅನಂತವೀರಪ್ಪ ಇದ್ದರು.

ಎಷ್ಟೋ ಸಹಕಾರ ಸಂಘಗಳು ಬೆಳೆದು ಇಂದು ಬ್ಯಾಂಕ್ ಗಳಾಗಿ ಪರಿವರ್ತನೆಗೊಂಡಿವೆ. ಕಡಿಮೆ ಬಡ್ಡಿ ದರದಲ್ಲಿ ಸಂಘದ ಸದಸ್ಯರಿಗೆ ಸಾಲ ನೀಡುವ ಮೂಲಕ ಕಷ್ಟದ ಕಾಲದಲ್ಲಿ ನೆರವಾಗಿವೆ. ಒಬ್ಬ ವ್ಯಕ್ತಿಯಿಂದ ಸಹಕಾರ ಸಂಘಗಳು ಬೆಳೆಯಲು ಸಾಧ್ಯವಿಲ್ಲ, ಒಬ್ಬರಿಗೊಬ್ಬರು ಕೂಡಿಕೊಂಡು ತಿಳುವಳಿಕೆಯಿಂದ ಕೆಲಸ ಮಾಡಿದರೆ ಸಂಘಗಳು ಬೆಳೆಯಲು ಸಾಧ್ಯ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಸಹಕಾರ ಸಂಘಗಳಲ್ಲಿ ರಾಜಕಾರಣ, ಸರ್ಕಾರದ ಹಸ್ತಕ್ಷೇಪ ಇಲ್ಲದಂತೆ ಸ್ವಾಯತ್ತ ಇದ್ದಾಗ ಮಾತ್ರ ಯಶಸ್ವಿಯಾಗಲು ಸಾಧ್ಯ. ಖಾಸಗಿ ಬ್ಯಾಂಕ್ ಗಳಲ್ಲಿ ಷೇರುದಾರರು ದೊಡ್ಡ ಉದ್ಯಮಿಗಳಾಗಿರುತ್ತಾರೆ. ಆದರೆ, ಸಹಕಾರ ಸಂಘಗಳಲ್ಲಿ ಇದು ಕಡಿಮೆ. ಮಧ್ಯಮ ವರ್ಗದವರು ಹೆಚ್ಚಿನ ಜನರು ಇರುತ್ತಾರೆ. ಸಹಕಾರಿ ಸಂಸ್ಥೆಗಳು ಉಳಿಯಬೇಕು, ಬೆಳೆಯಬೇಕು ಎಂದು ಹುಣಸೂರು ಶಾಸಕ ಜಿ.ಡಿ. ಹರೀಶ್ ಗೌಡ ಹೇಳಿದರು.

ಉದಯಕಾಲ
ಕನ್ನಡಿಗರ ಜೀವಾಳ

# ಸಹಕಾರಿ ಕ್ಷೇತ್ರದಲ್ಲಿ ಸರ್ಕಾರದ ಹಸ್ತಕ್ಷೇಪ ಸರಿಯಲ್ಲ

## ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಹೇಳಿಕೆ

ಉದಯಕಾಲ ನ್ಯೂಸ್

**ಮೈಸೂರು:** ಸಹಕಾರಿ ಕ್ಷೇತ್ರದಲ್ಲಿ ಸರ್ಕಾರ ಮತ್ತು ರಾಜಕಾರಣಿಗಳು ಹಸ್ತಕ್ಷೇಪ ಮಾಡಬಾರದು ಎಂಬ ದೃಷ್ಟಿಯಿಂದ ಸಹಕಾರಿ ಕ್ಷೇತ್ರಕ್ಕೆ ನಿಯಮಕ್ಕೆ ತಿದ್ದುಪಡಿ ತಂದಿದ್ದ ಕಾಯ್ದೆಯನ್ನು ವಿಧಾನ ಪರಿಷತ್ತಿನಲ್ಲಿ ತಡೆಹಿಡಿಯಲಾಗಿತ್ತು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ಮೈಸೂರಿನ ಮಹಾರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ನಡೆದ 99ನೇ ಸರ್ವ ಸದಸ್ಯರ ವಾರ್ಷಿಕ ಸಭೆ ಮತ್ತು ಸಹಕಾರ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರಿಗಳಲ್ಲಿ ಒಬ್ಬರಿಗೊಬ್ಬರು ತಿಳುವಳಿಕೆಯಿಂದ ಸಹಕಾರ ನೀಡುತ್ತಾ ಹೋದರೆ ದೊಡ್ಡದಾಗಿ ಬೆಳೆಯಲಿದೆ.

ಇಂತಹ ಸಂದರ್ಭದಲ್ಲಿ ಕೃಷ್ಣರಾಜೇಂದ್ರ ಸಹಕಾರ ಸಂಘ 99 ವರ್ಷ ಪೂರೈಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಶಾಸಕ ಜಿ.ಡಿ.ಹರೀಶ್ ಗೌಡ ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಇರಬಾರದು. ರಾಜಕೀಯ ಹಸ್ತಕ್ಷೇಪವಾದರೇ ಉಳಿವಿಗೆ ಬಹಳ ದೊಡ್ಡ ಹೊಡೆತ ಬೀಳಲಿದೆ ಎಂದರು.

ಸರ್ಕಾರದ ಹೂಡಿಕೆಯಿಂದ ಸಹಕಾರ ಸಂಘಗಳು ನಡೆಯುತ್ತಿಲ್ಲ. ತಮ್ಮ ಸ್ವಂತ ಹಣದಿಂದ ಸಹಕಾರಿ ಸಂಘಗಳು ಮುನ್ನಡೆಯುತ್ತಿವೆ.

ಇತ್ತೀಚೆಗೆ ಸಹಕಾರಿ ಕ್ಷೇತ್ರದಲ್ಲಿ ಬದಲಾವಣೆಗೊಂಡಿವೆ. ವಿಧಾನಸಭಾ, ಲೋಕಸಭಾ ಚುನಾವಣೆಯ ಮಾದರಿಯಲ್ಲಿ ಚುನಾವಣೆಗಳು ನಡೆಯುತ್ತಿದೆ. ಆದರೆ, ಕಳೆದ ಹತ್ತು ವರ್ಷಗಳಿಂದ ಹಿಂದೆ ಸಾಮಾನ್ಯವಾಗಿ ಚುನಾವಣೆಗಳು ನಡೆದು ಪದಾಧಿಕಾರಿಗಳು ಆಯ್ಕೆ ಆಗುತ್ತಿದ್ದರು ಎಂದು ಸ್ಮರಿಸಿದರು.

ಸರ್ವ ಸದಸ್ಯರ ಸಭೆಗಳಿಂದ ಸಹಕಾರಿ ಸಂಘಗಳು ಯಶಸ್ವಿಯಾಗಿ ನಡೆಯಲು ಸಾಧ್ಯ. ಚುನಾವಣೆಗಳು ನಡೆದ ಬಳಿಕ ಮನಸ್ತಾಪಗಳನ್ನು ಬಿಟ್ಟು ಒಂದುಗೂಡಿ ಕೆಲಸ ಮಾಡಬೇಕು ಎಂದರು.

> ‘ ಶಾಸಕ ಜಿ.ಟಿ.ದೇವೇಗೌಡ ಮತ್ತು ನಾನು ಆತ್ಮೀಯರು. ಆದರೆ, ಅವರ ಪುತ್ರರ ಬಗ್ಗೆ ತಿಳಿದಿರಲಿಲ್ಲ, ವಿಧಾನಸಭಾ ಚುನಾವಣೆಯಲ್ಲಿ ಆರಿಸಿ ಬಂದ ನಂತರ ತಿಳಿಯಿತು. ಯೋಗ್ಯ ಶಾಸಕರನ್ನು ಆಯ್ಕೆ ಮಾಡಿದ ಹುಣಸೂರು ಜನತೆಗೆ ಕೃತಜ್ಞತೆ ಸಲ್ಲಿಸುತ್ತೇನೆ.
>
> **-ಬಸವರಾಜ ಹೊರಟ್ಟಿ,**
> **ವಿಧಾನ ಪರಿಷತ್ ಸಭಾಪತಿ**

ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳಾದ ಕೆ.ವಿ.ನರಸಿಂಹಶೆಟ್ಟಿ, ಬಿ.ಪುಟ್ಟಸ್ವಾಮಿ, ಎಸ್.ಬಿ.ವಿಜಯಕುಮಾರ್, ಎಸ್.ಸದಾನಂದ, ಎಂ.ಕೆ.ಪುಟ್ಟಸ್ವಾಮಿ, ಸಿದ್ದರಾಜು, ಪಿ.ಸಿ.ನಾಗರಾಜನ್, ಕೆ.ಎಲ್. ಅನಂತರಾಮಯ್ಯ, ಎನ್.ನಾಗರಾಜು, ಡಿ.ರಾಮು, ಜೆ.ಕೃಷ್ಣ, ಕೆ.ಚಂದ್ರ, ಚನ್ನಯ್ಯ, ಬಾಲಂಬ, ಕಾತ್ಯಾಯಿನಿ, ಎನ್.ಜಯಲಕ್ಷ್ಮಿ, ಕೆ.ಆರ್.ಸೀತಾಲಕ್ಷ್ಮಿ, ಸುಶೀಲಮ್ಮ, ಡಿ.ಆಶಾ ಕುಮಾರಿ, ಕೆ.ಎಸ್.ಸುನಂದ ಅವರಿಗೆ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ವೇಳೆ ಕುಂದೂರು ಮಠದ ಅಧ್ಯಕ್ಷ ಡಾ.ಶರತ್‌ಚಂದ್ರ ಸ್ವಾಮೀಜಿ, ಕೃಷ್ಣರಾಜೇಂದ್ರ ಸಹಕಾರಿ ಬ್ಯಾಂಕ್‌ನ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು (ಬಸಪ್ಪ), ನಿರ್ದೇಶಕರಾದ ಎಂ.ಡಿ.ಪಾರ್ಥಸಾರಥಿ, ಸರ್ವಮಂಗಳ, ನವೀನ್ ಕುಮಾರ್, ಎಚ್ .ವಿ.ಭಾಸ್ಕರ್, ಅರುಣ್ ಸಿದ್ದಪ್ಪ, ನಾಗೇಂದ್ರ ಪ್ರಸಾದ್ ವಾಟಾಳ್, ಬಿ.ನಾಗರಾಜು, ವೃತ್ತಿಪರ ನಿರ್ದೇಶಕ ಎ.ಶ್ರೀನಿವಾಸ ಶೆಟ್ಟಿ, ವಿ.ಎಂ.ನಾಗೇಂದ್ರ ಪ್ರಸಾದ್, ಪ್ರಭಾರ ವ್ಯವಸ್ಥಾಪಕ ಡಿ.ಅನಂತವೀರಪ್ಪ ಉಪಸ್ಥಿತರಿದ್ದರು.

VK
ವಿಜಯ ಕರ್ನಾಟಕ
e-paper

# ಸಹಕಾರಿ ಸಂಘಗಳ ವಿಚಾರದಲ್ಲಿ ಹಸ್ತಕ್ಷೇಪ ಸಲ್ಲ

## ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯ

**ವಿಕ ಸುದ್ದಿಲೋಕ** ಮೈಸೂರು

ಆಪತ್ಬಾಂಧವನಾಗಿ ಕೆಲಸ ಮಾಡುತ್ತಿರುವ ಸಹಕಾರಿ ಸಂಘಗಳ ವಿಚಾರದಲ್ಲಿ ಸರಕಾರ, ರಾಜಕಾರಣ ಹೆಚ್ಚಾಗಿ ಹಸ್ತಕ್ಷೇಪ ಮಾಡಬಾರದು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

''ಎಷ್ಟೋ ಸಹಕಾರ ಸಂಘಗಳು ಬೆಳೆದು ಇಂದು ಬ್ಯಾಂಕ್‌ಗಳಾಗಿ ಪರಿವರ್ತನೆಗೊಂಡಿವೆ. ಕಡಿಮೆ ಬಡ್ಡಿ ದರದಲ್ಲಿ ಸಂಘದ ಸದಸ್ಯರಿಗೆ ಸಾಲ ನೀಡುವ ಮೂಲಕ ಕಷ್ಟದ ಕಾಲದಲ್ಲಿ ನೆರವಾಗಿವೆ. ಸಹಕಾರ ಸಂಘಗಳು ಸ್ವತಂತ್ರವಾಗಿ ಕೆಲಸ ಮಾಡುತ್ತಿರುವುದೇ ಇದಕ್ಕೆ ಕಾರಣವಾಗಿದೆ. ಇಂತಹ ಸಂದರ್ಭದಲ್ಲಿ ಹೆಚ್ಚಾಗಿ ಸರಕಾರ ಹಾಗೂ ರಾಜಕಾರಣ ಪ್ರವೇಶಿಸುವುದು ಸರಿಯಲ್ಲ. ಈ ಬಗ್ಗೆ ವಿಧಾನಸಭೆ, ವಿಧಾನಪರಿಷತ್‌ನಲ್ಲಿಯೂ ಚರ್ಚಿಸಲಾಗಿದೆ,'' ಎಂದರು.



ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಉತ್ತಮ ಸೇವೆ ಸಲ್ಲಿಸಿದ 20ಕ್ಕೂ ಹೆಚ್ಚು ಹಿರಿಯ ಸಹಕಾರಿಗಳಿಗೆ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಶಾಸಕ ಜಿ.ಡಿ.ಹರೀಶ್ ಗೌಡ ಮಾತನಾಡಿ, ''ಅವ್ಯವಹಾರ, ವ್ಯತ್ಯಾಸ ಗಳಿಂದ ಎಷ್ಟೋ ಸಹಕಾರಸಂಘಗಳು ಕಾರ್ಯ ನಿರ್ವಹಿಸುತ್ತಿಲ್ಲ, ಆದರೆ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್‌ಗೆ 99 ವರ್ಷಗಳು ತುಂಬಿದ್ದು, ಎಲ್ಲವೂ ಸರಿ ಇದ್ದರೆ ಮಾತ್ರ ಸಂಘಗಳು ಯಶಸ್ವಿಯಾಗಿ ನಡೆಯಲು ಸಾಧ್ಯ. ಈ ಹಿಂದೆ ಸಹಕಾರ ಸಂಘಗಳ ಚುನಾವಣೆ ಬಗ್ಗೆ ಗೊತ್ತೇ ಆಗುತ್ತಿರಲಿಲ್ಲ, ಆದರೆ, ಈಗ ಲೋಕಸಭೆ, ವಿಧಾನಸಭಾ ಚುನಾವಣೆಗಳಿಗಿಂತಲೂ ಕಡಿಮೆ ಇಲ್ಲದಂತೆ ಚುನಾವಣೆಗಳು ನಡೆಯುತ್ತವೆ'' ಎಂದರು.

''ಖಾಸಗಿ ಬ್ಯಾಂಕ್‌ಗಳಲ್ಲಿ ಷೇರುದಾರರು ದೊಡ್ಡ ಉದ್ಯಮಿಗಳಾಗಿರುತ್ತಾರೆ. ಆದರೆ, ಸಹಕಾರ ಸಂಘಗಳಲ್ಲಿ ಇದು ಕಡಿಮೆ. ಮಧ್ಯಮ ವರ್ಗದವರು ಹೆಚ್ಚಿನ ಜನರು ಇರುತ್ತಾರೆ. ಸಹಕಾರಿ ಸಂಸ್ಥೆಗಳು ಉಳಿಯಬೇಕು, ಬೆಳೆಯಬೇಕು'' ಎಂದರು.

ಕುಂದೂರು ಮಠದ ಶರತ್ಚಂದ್ರ ಸ್ವಾಮೀಜಿ ಮಾತನಾಡಿದರು. ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು (ಬಸಪ್ಪ), ನಿರ್ದೇಶಕರಾದ ಎಂ.ಡಿ.ಪಾರ್ಥಸಾರಥಿ, ಕೆ.ಜಿ. ಶಂಕರ ನಾರಾಯಣಶಾಸ್ತ್ರಿ ನಂಸಿದ್ದಪ್ಪ ಎಂ.ಎ., ಎಚ್.ಎನ್. ಸರ್ವಮಂಗಳ, ಬಿ.ನಾಗ ರಾಜ್, ಎಂ.ಎನ್.ನವೀನ್‌ಕುಮಾರ್, ಎಚ್.ವಿ. ಭಾಸ್ಕರ್, ಎಂ.ಎಸ್.ಅರುಣ್ ಸಿದ್ದಪ್ಪ ವಿ.ಎಂ.ನಾಗೇಂದ್ರ ಪ್ರಸಾದ್ ಇದ್ದರು.

ಆಂದೋಲನ

# 'ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಸಲ್ಲದು: ಬಸವರಾಜ ಹೊರಟ್ಟಿ

## ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಸಭೆಯಲ್ಲಿ ಸಭಾಪತಿ ನುಡಿ



ಮೈಸೂರು: ಸಹಕಾರ ಕ್ಷೇತ್ರದಲ್ಲಿ ಸರ್ಕಾರ ಮತ್ತು ರಾಜಕಾರಣಿಗಳು ಹಸ್ತಕ್ಷೇಪ ಮಾಡಬಾರದು ಎಂದು ವಿಧಾನಪರಿಷತ್ ಸಭಾಪತಿ ಬಸವ ರಾಜ ಹೊರಟ್ಟಿ ತಿಳಿಸಿದರು.

ನಗರದ ಮಹಾರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ನಡೆದ 99ನೇ ಸರ್ವ ಸದಸ್ಯರ ವಾರ್ಷಿಕ ಸಭೆ ಮತ್ತು ಸಹಕಾರ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರಸಂಘಗಳುಮುನ್ನಡೆಯಲು ಸದಸ್ಯರ ಸಹಕಾರ ಮುಖ್ಯವಾದದ್ದು. ಸಂಸ್ಥೆಯನ್ನು ಪ್ರಾರಂಭಿಸುವುದು ಸುಲಭ. ಆದರೆ, ಯಶಸ್ವಿಯಾಗಿ ಮುನ್ನಡೆಸುವುದು ಸುಲಭವಲ್ಲ. ಇಂತಹ ಸಂದರ್ಭದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಸಂಘ 99 ವರ್ಷಗಳನ್ನು ಪೂರೈಸಿರುವುದು ಶ್ಲಾಘನೀಯ ಎಂದು ಪ್ರಶಂಸಿದರು.

ಶಾಸಕ ಜಿ.ಡಿ.ಹರೀಶ್‌ಗೌಡ ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಇರಬಾರದು. ರಾಜಕೀಯ ಹಸ್ತಕ್ಷೇಪವಾದರೆ ಸಹಕಾರ ಕ್ಷೇತ್ರದ ಉಳಿವಿಗೆ ಬಹಳ ದೊಡ್ಡ ಹೊಡೆತ ಬೀಳಲಿದೆ. ಸರ್ಕಾರಿ ಹಸ್ತಕ್ಷೇಪ ಇಲ್ಲದೆ ಸ್ವಾಯತ್ತತೆ ಇರಬೇಕು. ಈ ಕುರಿತು ಸದನದಲ್ಲಿ ನಾನು ಮಾತನಾಡಿದ್ದೇನೆ ಎಂದರು.

**ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರು:** ಕೆ.ವಿ.ನರಸಿಂಹಶೆಟ್ಟಿ, ಬಿ.ಪುಟ್ಟಸ್ವಾಮಿ, ಎಸ್.ಬಿ.ವಿಜಯ ಕುಮಾರ್, ಎಸ್.ಸದಾನಂದ, ಎಂ.ಕೆ.ಪುಟ್ಟಸ್ವಾಮಿ, ಸಿದ್ದರಾಜು, ಪಿ.ಸಿ.ನಾಗರಾಜನ್, ಕೆ.ಎಲ್.ಅನಂತರಾಮಯ್ಯ, ಎನ್.ನಾಗರಾಜು, ಡಿ.ರಾಮು, ಜಿ.ಕೃಷ್ಣ, ಕೆ.ಚಂದ್ರ, ಚನ್ನಯ್ಯ, ಬಾಲಂಬ, ಕಾತ್ಯಾಯಿನಿ, ಎನ್.ಜಯಲಕ್ಷ್ಮೀ, ಕೆ.ಆರ್.ಸೀತಾಲಕ್ಷ್ಮೀ, ಸುಶೀಲಮ್ಮ, ಡಿ.ಆಶಾಕುಮಾರಿ, ಕೆ.ಎಸ್.ಸುನಂದ ಅವರಿಗೆ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಕುಂದೂರು ಮಠದ ಅಧ್ಯಕ್ಷ ಡಾ.ಶ್ರೀಶರತ್‌ಚಂದ್ರ ಸ್ವಾಮೀಜಿ, ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್‌ನ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು(ಬಸಪ್ಪ), ನಿರ್ದೇಶಕರಾದ ಎಂ.ಡಿ.ಪಾರ್ಥ ಸಾರಥಿ, ಸರ್ವ ಮಂಗಳ, ನವೀನ್ ಕುಮಾರ್, ಎಚ್.ವಿ.ಭಾಸ್ಕರ್, ಅರುಣ್ ಸಿದ್ದಪ್ಪ, ನಾಗೇಂದ್ರ ಪ್ರಸಾದ್ ವಾಟಾಳ್, ಬಿ.ನಾಗರಾಜು ಇನ್ನಿತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

Main Edition
Sep 16, 2024 Page No. 2
Powered by: erelego.com



ಮೈಸೂರು ಮಿತ್ರ

# ಸಹಕಾರಿ ಕ್ಷೇತ್ರದಲ್ಲಿ ಸರ್ಕಾರದ ಹಸ್ತಕ್ಷೇಪ ಇರಬಾರದೆಂದು ಕಾಯ್ದೆ ತಿದ್ದುಪಡಿಗೆ ಪರಿಷತ್‌ನಲ್ಲಿ ತಡೆ

## ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ



ಮೈಸೂರಿನ ಮಹಾರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ನಡೆದ 99ನೇ ಸರ್ವ ಸದಸ್ಯರ ವಾರ್ಷಿಕ ಸಭೆ ಮತ್ತು ಸಹಕಾರ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

ಮೈಸೂರು, ಸೆ.15(ಜಿಎ)– ಸಹಕಾರಿ ಕ್ಷೇತ್ರದಲ್ಲಿ ಸರ್ಕಾರ ಮತ್ತು ರಾಜಕಾರಣಿಗಳು ಹಸ್ತಕ್ಷೇಪ ಮಾಡಬಾರದು ಎಂಬ ದೃಷ್ಟಿಯಿಂದ ಸಹಕಾರಿ ಕ್ಷೇತ್ರ ನಿಯಮಕ್ಕೆ ತಿದ್ದುಪಡಿ ತಂದಿದ್ದ ಕಾಯ್ದೆಯನ್ನು ವಿಧಾನಪರಿಷತ್ತಿನಲ್ಲಿ ತಡೆಹಿಡಿಯಲಾಗಿತ್ತು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ಮೈಸೂರಿನ ಮಹಾರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಶ್ರೀ ಕೃಷ್ಣ ರಾಜೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ನಡೆದ 99ನೇ ಸರ್ವ ಸದಸ್ಯರ ವಾರ್ಷಿಕ ಸಭೆ ಮತ್ತು ಸಹಕಾರ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರಿಗಳಲ್ಲಿ ಒಬ್ಬರಿಗೊಬ್ಬರು ತಿಳುವಳಿಕೆಯಿಂದ ಸಹಕಾರ ನೀಡುತ್ತಾ ಹೋದರೆ ಸಹಕಾರ ಕ್ಷೇತ್ರ ದೊಡ್ಡದಾಗಿ ಬೆಳೆಯಲಿದೆ ಎಂದರು.

ಬ್ಯಾಂಕುಗಳಲ್ಲಿ ಷರತ್ತುಗಳನ್ನು ನಿಭಾಯಿಸಿ ಸಾಲ ಪಡೆಯುವ ಕಷ್ಟದ ಸಮಯದಲ್ಲಿ ಸಹಕಾರಿ ಸಂಘಗಳು ನೆರವಾಗಲಿವೆ. ಸಹಕಾರಿ ಸಂಘ–ಸಂಸ್ಥೆಗಳಲ್ಲಿ ಹಣ ಹೂಡಿಕೆ ಮಾಡುವುದು ಮನೆಯಲ್ಲಿಯೇ ಇಟ್ಟಂತೆ. ಸಹಕಾರಿ ಸಂಘಗಳು ಮುನ್ನಡೆಯಲು ಸದಸ್ಯರ ಸಹಕಾರ ಮುಖ್ಯವಾದದ್ದು. ಸಂಸ್ಥೆಯನ್ನು ಪ್ರಾರಂಭಿಸುವುದು ಸುಲಭ. ಆದರೆ, ಯಶಸ್ವಿಯಾಗಿ ಮುನ್ನಡೆಸುವುದು ಸುಲಭವಲ್ಲ. ಇಂತಹ ಸಂದರ್ಭದಲ್ಲಿ ಶ್ರೀ ಕೃಷ್ಣರಾಜೇಂದ್ರ ಸಹಕಾರ ಸಂಘ 99 ವರ್ಷ ಪೂರೈಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಸಕ ಜಿ.ಡಿ.ಹರೀಶ್ ಗೌಡ ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಇರಬಾರದು. ರಾಜಕೀಯ ಹಸ್ತಕ್ಷೇಪವಾದರೇ ಸಹಕಾರ ಕ್ಷೇತ್ರದ ಉಳಿವಿಗೆ ಬಹಳ ದೊಡ್ಡ ಹೊಡೆತ ಬೀಳಲಿದೆ. ಸರ್ಕಾರಿ ಹಸ್ತಕ್ಷೇಪ ಇಲ್ಲದೆ ಸ್ವಾಯತ್ತತೆ ಇರಬೇಕು. ಈ ಕುರಿತು ಸದನದಲ್ಲಿ ನಾನು ಮಾತನಾಡಿದ್ದೇನೆ ಎಂದರು.

ಸರ್ಕಾರದ ಹೂಡಿಕೆಯಿಂದ ಸಹಕಾರ ಸಂಘಗಳು ನಡೆಯುತ್ತಿಲ್ಲ. ತಮ್ಮ ಸ್ವಂತ ಹಣದಿಂದ ಸಹಕಾರಿ ಸಂಘಗಳು ಮುನ್ನಡೆಯುತ್ತಿವೆ. ಇತ್ತೀಚೆಗೆ ಸಹಕಾರಿ ಕ್ಷೇತ್ರದಲ್ಲಿ ಬದಲಾವಣೆಗೊಂಡಿವೆ. ವಿಧಾನಸಭಾ, ಲೋಕಸಭಾ ಚುನಾವಣೆಯ ಮಾದರಿಯಲ್ಲಿ ಚುನಾವಣೆಗಳು ನಡೆಯುತ್ತಿವೆ. ಆದರೆ, ಕಳೆದ ಹತ್ತು ವರ್ಷಗಳಿಂದ ಹಿಂದೆ ಸಾಮಾನ್ಯವಾಗಿ ಚುನಾವಣೆಗಳು ನಡೆದು ಪದಾಧಿಕಾರಿಗಳು ಆಯ್ಕೆ ಆಗುತ್ತಿದ್ದರು ಎಂದು ಸ್ಮರಿಸಿದರು.

ಸಹಕಾರ ಸಂಘಗಳ ಸಾಧನೆ ಸರ್ವ ಸದಸ್ಯರ ಭಾಗವಹಿಸುವಿಕೆ ಮತ್ತು ಪ್ರಶ್ನೆ ಮಾಡುವುದು ಮುಖ್ಯ. ಸಹಕಾರಿ ಕ್ಷೇತ್ರದಲ್ಲಿ ಆಡಳಿತ ವ್ಯತ್ಯಾಸ, ಅವ್ಯವಹಾರ ನಡೆದು ಪ್ರಾರಂಭವಾಗಿ ಕೆಲವೇ ವರ್ಷಗಳಲ್ಲಿ ಮುಚ್ಚುವ ಹಂತ ತಲುಪಲಿವೆ. ಆಡಳಿತ ಪಾರದರ್ಶಕವಾಗಿದ್ದರೆ ಮಾತ್ರ ಸಹಕಾರಿ ಬ್ಯಾಂಕುಗಳು ಉತ್ತಮವಾಗಿ ನಡೆಯಲು ಸಾಧ್ಯ. ಪಾರದರ್ಶಕ ವ್ಯವಹಾರದಿಂದ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಶತಮಾನೋತ್ಸವದ ಹೊಸ್ತಿಲಿಗೆ ಬರಲು ಕಾರಣವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಸರ್ವ ಸದಸ್ಯರ ಸಭೆಗಳಿಂದ ಸಹಕಾರಿ ಸಂಘಗಳು ಯಶಸ್ವಿಯಾಗಿ ನಡೆಯಲು ಸಾಧ್ಯ ಚುನಾವಣೆಗಳು ನಡೆದ ಬಳಿಕ ಮನಸ್ತಾಪಗಳನ್ನು ಬಿಟ್ಟು ಒಂದುಗೂಡಿ ಕೆಲಸ ಮಾಡಬೇಕು. ಆಗ ಸಂಘವು ಮುಂದುವರಿಯಲಿದೆ ಎಂದರು.

**ಸಹಕಾರ ರತ್ನ ಪ್ರಶಸ್ತಿ :** ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳಾದ ಕೆ.ವಿ.ನರಸಿಂಹಶೆಟ್ಟಿ, ಬಿ.ಪುಟ್ಟಸ್ವಾಮಿ, ಎಸ್.ಬಿ.ವಿಜಯಕುಮಾರ್, ಎಸ್.ಸದಾನಂದ, ಎಂ.ಕೆ.ಪುಟ್ಟಸ್ವಾಮಿ, ಸಿದ್ದರಾಜು, ಪಿ.ಸಿ.ನಾಗರಾಜನ್, ಕೆ.ಎಲ್.ಅನಂತರಾಮಯ್ಯ, ಎನ್.ನಾಗರಾಜು, ಡಿ.ರಾಮು, ಜಿ.ಕೃಷ್ಣ, ಕೆ.ಚಂದ್ರ ಚನ್ನಯ್ಯ, ಬಾಲಂಬ, ಕಾತ್ಯಾಯಿನಿ, ಎನ್.ಜಯಲಕ್ಷ್ಮಿ, ಕೆಆರ್.ಸೀತಾಲಕ್ಷ್ಮಿ, ಸುಶೀಲಮ್ಮ, ಡಿ.ಆಶಾ ಕುಮಾರಿ, ಕೆ.ಎಸ್.ಸುನಂದ ಅವರಿಗೆ ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ವೇಳೆ ಶ್ರೀ ಕುಂದೂರು ಮಠದ ಅಧ್ಯಕ್ಷ ಡಾ.ಶ್ರೀ ಶರತ್‌ಚಂದ್ರ ಸ್ವಾಮೀಜಿ, ಶ್ರೀ ಕೃಷ್ಣರಾಜೇಂದ್ರ ಸಹಕಾರಿ ಬ್ಯಾಂಕ್‌ನ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು (ಬಸಪ್ಪ), ನಿರ್ದೇಶಕರಾದ ಎಂ.ಡಿ.ಪಾರ್ಥಸಾರಥಿ, ಸರ್ವಮಂಗಳ, ನವೀನ್ ಕುಮಾರ್, ಎಚ್.ವಿ.ಭಾಸ್ಕರ್, ಅರುಣ್ ಸಿದ್ದಪ್ಪ ನಾಗೇಂದ್ರಪ್ರಸಾದ್ ವಾಟಾಳ್, ಬಿ.ನಾಗರಾಜು, ವೃತ್ತಿಪರ ನಿರ್ದೇಶಕ ಎ.ಶ್ರೀನಿವಾಸ ಶೆಟ್ಟಿ, ವಿ.ಎಂ.ನಾಗೇಂದ್ರ ಪ್ರಸಾದ್, ಪ್ರಧಾನ ವ್ಯವಸ್ಥಾಪಕ ಡಿ.ಅನಂತವೀರಪ್ಪ ಉಪಸ್ಥಿತರಿದ್ದರು.

> ಶಾಸಕ ಜಿ.ಟಿ.ದೇವೇಗೌಡ ಮತ್ತು ನಾನು ಆತ್ಮೀಯರು. ಆದರೆ, ಅವರ ಪುತ್ರರ ಬಗ್ಗೆ ತಿಳಿದಿರಲಿಲ್ಲ. ವಿಧಾನ ಸಭಾ ಚುನಾವಣೆಯಲ್ಲಿ ಆರಿಸಿ ಬಂದ ನಂತರ ತಿಳಿಯಿತು. ಯೋಗ್ಯ ಶಾಸಕರನ್ನು ಆಯ್ಕೆ ಮಾಡಿದ ಹುಣಸೂರು ಜನತೆಗೆ ಕೃತಜ್ಞತೆ ಸಲ್ಲಿಸುತ್ತೇನೆ.
>
> -ಬಸವರಾಜ ಹೊರಟ್ಟಿ,
> ವಿಧಾನಪರಿಷತ್ ಸಭಾಪತಿ